# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | | **893 (1121)** |
| **ಸದಸ್ಯರ ಹೆಸರು** | | **ಶ್ರೀಮತಿ ಹೇಮಲತಾ ನಾಯಕ್ (ವಿಧಾನ ಸಭೆಯಿಂದ ಚುನಾಯಿತರಾದವರು)** |
| **ಉತ್ತರಿಸಬೇಕಾದ ದಿನಾಂಕ** | | **17-03-2025** |
| **ಉತ್ತರಿಸಬೇಕಾದ ಸಚಿವರು** | | **ಉನ್ನತ ಶಿಕ್ಷಣ ಸಚಿವರು** |
| **ಪ್ರಶ್ನೆ** | | **ಉತ್ತರ** |
| ಅ) | ರಾಜ್ಯದಲ್ಲಿ ಸರ್ಕಾರದ ದ್ವಿಮುಖ ನೀತಿಯಿಂದಾಗಿ ಅನುದಾನಿತ ಶಿಕ್ಷಣ ಸಂಸ್ಥೆಗಳು ನಡೆಸುವ ಕಾಲೇಜುಗಳಲ್ಲಿ ಬ್ಯಾಕ್ ಲಾಗ್ ಹುದ್ದೆಗಳು ಭರ್ತಿಯಾಗದೆ ಖಾಲಿ ಉಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು; | **ಕಾಲೇಜು ಶಿಕ್ಷಣ ಇಲಾಖಾ** ವ್ಯಾಪ್ತಿಯಲ್ಲಿ ಬರುವ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಸರ್ಕಾರದ ಆದೇಶ ಸಂಖ್ಯೆ: ಇಡಿ/357/ಯುಪಿಸಿ/2002, ದಿನಾಂಕ:19.12.2002ರಲ್ಲಿ ಗುರುತಿಸಿರುವ ಬ್ಯಾಕ್‌ಲಾಗ್ ಹುದ್ದೆಗಳ ಪೈಕಿ **ಒಟ್ಟು 313** ಬ್ಯಾಕ್‌ಲಾಗ್ ಹುದ್ದೆಗಳು ಭರ್ತಿ ಮಾಡಲು ಬಾಕಿ ಉಳಿದಿರುತ್ತವೆ.<br><br>ಸದರಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಮಂಜೂರಾದ ಖಾಲಿ ಹುದ್ದೆ ಮತ್ತು ಕಾರ್ಯಭಾರ ಉದ್ಭವಿಸಿದ ಕೂಡಲೇ ಹಂತ ಹಂತವಾಗಿ ಭರ್ತಿ ಮಾಡಲಾಗುತ್ತಿದೆ.<br><br>**ತಾಂತ್ರಿಕ ಶಿಕ್ಷಣ ಇಲಾಖೆ**ಯ ವ್ಯಾಪ್ತಿಯಲ್ಲಿನ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು ಹಾಗೂ ಪಾಲಿಟೆಕ್ನಿಕ್ ಸಂಸ್ಥೆಗಳನ್ನು ಒಟ್ಟು 270 ಬೋಧಕ ಮತ್ತು 432 ಬೋಧಕೇತರ ಬ್ಯಾಕ್‌ಲಾಗ್ ಹುದ್ದೆಗಳು ಖಾಲಿ ಇರುತ್ತವೆ. ಅವುಗಳಲ್ಲಿ 2024-25ನೇ ಸಾಲಿನಲ್ಲಿ ಒಟ್ಟು 23 ಬೋಧಕ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. |
| ಆ) | ಉನ್ನತ ಶಿಕ್ಷಣ ಇಲಾಖೆ ವ್ಯಾಪ್ತಿಯ ಕಾಲೇಜು ಶಿಕ್ಷಣ ಇಲಾಖೆ ಹಾಗೂ ತಾಂತ್ರಿಕ ಶಿಕ್ಷಣ ಇಲಾಖೆ ಅಧೀನದ ಅನುದಾನಿತ ಕಾಲೇಜುಗಳಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಕಾರಣಗಳಿಂದ ಖಾಲಿಯಾದ ಹುದ್ದೆಗಳ ಭರ್ತಿಗೆ ಸರ್ಕಾರ ತೆಗೆದುಕೊಂಡ ಕ್ರಮವೇನು; | **ಕಾಲೇಜು ಶಿಕ್ಷಣ ಇಲಾಖೆ**<br>ಸರ್ಕಾರದ ಪತ್ರ ಸಂಖ್ಯೆ:ಇಡಿ/240/ಯುಪಿಸಿ/2014, ದಿ:01.09.2017 ರನ್ವಯ ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ದಿನಾಂಕ:31.12.2015 ರೊಳಗೆ ನಿವೃತ್ತಿ, ನಿಧನ, ರಾಜೀನಾಮೆ ಹಾಗೂ ಮತ್ತಿತರೆ ಕಾರಣಗಳಿಂದ ಖಾಲಿಯಾಗಿರುವ ಬೋಧಕ ಹುದ್ದೆಗಳನ್ನು ನಿಯಮಾನುಸಾರ ನಿಗದಿತ ವಿದ್ಯಾರ್ಥಿಗಳ ಸಂಖ್ಯೆ, ಮೀಸಲಾತಿ, ಅಗತ್ಯ ಕಾರ್ಯಭಾರದ ಆಧಾರದ ಮೇಲೆ ನಿಯಮಾನುಸಾರ ಭರ್ತಿ ಮಾಡಿಕೊಳ್ಳಲು ಈವರೆವಿಗೂ ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಸರ್ಕಾರದ ಆದೇಶ ಸಂಖ್ಯೆ:ಇಡಿ/140/ಯುಪಿಸಿ/2024 (ಇ), ದಿನಾಂಕ:03.09.2024 ರಲ್ಲಿ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ದಿನಾಂಕ:01.01.2016 ರಿಂದ ದಿನಾಂಕ:31.12.2020 ರವರೆಗೆ ಖಾಲಿಯಾಗಿರುವ ಬೋಧಕರ ಹುದ್ದೆಗಳನ್ನು ಭರ್ತಿ ಮಾಡಲು ಕೆಲವು ಷರತ್ತು ಮತ್ತು ಮಾನದಂಡಗಳನ್ನು ನಿಗದಿಪಡಿಸಿ ಆದೇಶಿಸಲಾಗಿದೆ. ಅದರಂತೆ ಅನುದಾನಿತ ಪದವಿ ಕಾಲೇಜುಗಳಲ್ಲಿನ ಖಾಲಿ ಹುದ್ದೆ ಭರ್ತಿಯ ಪ್ರಸ್ತಾವನೆಗಳನ್ನು ಆನ್‌ಲೈನ್ ಮೂಲಕ ವಿವರಗಳು ಮತ್ತು ದಾಖಲೆಗಳನ್ನು ಸಲ್ಲಿಸಲು ತಂತ್ರಾಂಶವನ್ನು ಅಭಿವೃದ್ಧಿ ಪಡಿಸಲು ಸೂಚಿಸಲಾಗಿದೆ ಹಾಗೂ ಸದರಿ ತಂತ್ರಾಂಶದ ಮೂಲಕ ಪ್ರಸ್ತಾವನೆಗಳನ್ನು ವ್ಯವಹರಿಸಬೇಕೆಂದು ಸೂಚಿಸಲಾಗಿದೆ.<br><br>ಸದರಿ ಸರ್ಕಾರದ ಆದೇಶದನ್ವಯ ಮೇಲೆ ತಿಳಿಸಿದ ತಂತ್ರಾಂಶವನ್ನು ಇಲಾಖಾ ಹಂತದಲ್ಲಿ ಅಭಿವೃದ್ಧಿಪಡಿಸಲಾಗುತ್ತಿದ್ದು (~~TESTING PHASE~~) ಟೆಸ್ಟಿಂಗ್ ಫೇಸ್‌ನಲ್ಲಿ ಇರುತ್ತದೆ. |

(Testing Phase)

| | | |
|---|---|---|
| | | **ತಾಂತ್ರಿಕ ಶಿಕ್ಷಣ ಇಲಾಖಾ** ವ್ಯಾಪ್ತಿಯ ಕಾಲೇಜುಗಳಲ್ಲಿ ಗುರುತಿಸಲಾಗಿರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಕಾಲಕಾಲಕ್ಕೆ ಸಂಸ್ಥೆಗಳಲ್ಲಿ ನಿವೃತ್ತಿ, ನಿಧನ ರಾಜೀನಾಮೆ ಇತ್ಯಾದಿ ಕಾರಣಗಳಿಂದ ಖಾಲಿಯಾದ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತಿದೆ.<br><br>ಸರ್ಕಾರದ ಸುತ್ತೋಲೆ ಸಂಖ್ಯೆ: ಆಇ 02 ಬಿಇಎಂ 2024 ದಿನಾಂಕ:07.06.2024 ರಲ್ಲಿ ಗ್ರೂಪ್ ಡಿ ಮತ್ತು ಸಮಾನಂತರ ಹುದ್ದೆ ಮತ್ತು ಗ್ರೂಪ್-ಸಿ ಹುದ್ದೆಗಳಾದ ಬೆರಳಚ್ಚುಗಾರರು/ದತ್ತಾಂಶ ನಮೂದು ಸಹಾಯಕರು, ವಾಹನ ಚಾಲಕರು, ಶೀಘ್ರಲಿಪಿಗಾರರ ಹುದ್ದೆಗಳನ್ನು ಹೊರಗುತ್ತಿಗೆ ಮೂಲಕವೇ ಭರ್ತಿಮಾಡತಕ್ಕದ್ದು ಎಂದು ತಿಳಿಸಲಾಗಿರುತ್ತದೆ.<br><br>ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಸೇರಿದ ವ್ಯಕ್ತಿಗಳಿಗೆ ಮೀಸಲಾದ ಭರ್ತಿ ಮಾಡದ ಖಾಲಿ ಹುದ್ದೆಗಳು) (ವಿಶೇಷ ನೇಮಕಾತಿ) ನಿಯಮಗಳು 2001, ದಿನಾಂಕ:21/11/2001 ರಂದು ಬಂದಿರುತ್ತದೆ. ಈ ನಿಯಮಗಳ 1(3)ರಲ್ಲಿ ಜಾರಿಗೆ ಈ ನಿಯಮಗಳು ಪ್ರಾರಂಭವಾದ ದಿನಾಂಕದಂದು ಅಂದರೆ, ದಿನಾಂಕ:21.11.2001 ಅಸ್ತಿತ್ವದಲ್ಲಿರುವ ಭರ್ತಿ ಮಾಡದ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಉದ್ದೇಶಕ್ಕಾಗಿ ಅನ್ವಯವಾಗುತ್ತದೆ ಎಂದು ತಿಳಿಸಲಾಗಿದೆ.<br><br>ಅನುದಾನಿತ ಇಂಜಿನಿಯರಿಂಗ್ ಮತ್ತು ಪಾಲಿಟೆಕ್ನಿಕ್ ಕಾಲೇಜುಗಳಲ್ಲಿನ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಸಲ್ಲಿಸಿರುವ ಕ್ರೋಢೀಕೃತ ಪ್ರಸ್ತಾವನೆಗೆ ಸಂಬಂಧಿಸಿದಂತೆ, ದಿನಾಂಕ:21.11.2001 ರಂದು ಅಸ್ತಿತ್ವದಲ್ಲಿರುವ ಭರ್ತಿ ಮಾಡದ ಖಾಲಿ ಹುದ್ದೆಗಳ ಮಾಹಿತಿಯನ್ನು ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರಿಂದ ಪಡೆದು, ನಿಯಮಾನುಸಾರ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿ ಪ್ರಕ್ರಿಯೆಯನ್ನು ಕೈಗೊಳ್ಳಲಾಗುವುದು. |
| ಇ) | ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಗೆ ಅನುಮತಿ ನೀಡಿದ 5 ವರ್ಷಗಳ ನಂತರ ಉನ್ನತ ಶಿಕ್ಷಣ ಇಲಾಖೆ 2001ರ ನಿಯಮ ಉಲ್ಲೇಖಿಸಿದ್ದು, 2002, 2012ರಲ್ಲಿ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿ ಮಾಡಲಾದ ಸಂದರ್ಭದಲ್ಲಿದ್ದ ನಿಯಮಗಳಾವುವು? | 2001ರ ನಿಯಮ ಕಾರಣ ನೀಡಿ ಯಾವುದೇ ಬ್ಯಾಕ್‌ಲಾಗ್ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ತಡೆಹಿಡಿದಿರುವುದಿಲ್ಲ. ಬ್ಯಾಕ್‌ಲಾಗ್ ಹುದ್ದೆಗಳನ್ನು ತುರ್ತಾಗಿ ಭರ್ತಿ ಮಾಡಲು ಇಲಾಖಾ ಹಂತದಲ್ಲಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಸೇರಿದ ವ್ಯಕ್ತಿಗಳಿಗೆ ಮೀಸಲಾದ ಭರ್ತಿ ಮಾಡದ ಖಾಲಿ ಹುದ್ದೆಗಳು (ವಿಶೇಷ ನೇಮಕಾತಿ ನಿಯಮಗಳು) ನಿಯಮಗಳು 2001 ರನ್ವಯ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತಿದೆ. |

ಇಡಿ 53 ಯುಪಿಸಿ 2025 (ಇ)

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು